## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ದಿನಾಂಕ : 01.06.1987 ರಿಂದ 1994-95ನೇ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಪ್ರಾರಂಭವಾದ ಅನುದಾನರಹಿತ ಶಾಲಾ/ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸಲ್ಲಿಸುವ ಕೋರಿಕೆ/ಪ್ರಸ್ತಾವನೆಗಳ ಕುರಿತು.

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ : ಇಡಿ 59 ಪಿಎಂಸಿ 2006, ದಿನಾಂಕ : 06/10/2007.
2. ಸರ್ಕಾರದ ಆದೇಶ ಸಂಖ್ಯೆ : ಇಡಿ 217 ಪಿಎಂಸಿ 2008, ದಿನಾಂಕ : 08/09/2008.

ಪ್ರಸ್ತಾವನೆ :-

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಆದೇಶದಲ್ಲಿ ದಿನಾಂಕ : 01.06.1987ರಿಂದ 1992-93ನೇ ಸಾಲಿನಲ್ಲಿ ಪ್ರಾರಂಭಗೊಂಡ ಹಾಗೂ ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಆದೇಶದಲ್ಲಿ 1993-94 ಮತ್ತು 1994-95ನೇ ಸಾಲಿನಲ್ಲಿ ಪ್ರಾರಂಭಗೊಂಡು ಸತತವಾಗಿ ನಡೆಯುತ್ತಿರುವ ಹಾಗೂ ನಿಗದಿತ ಮಾನದಂಡಗಳನ್ನು ಪೂರೈಸಿರುವ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಆಸ್ಪದ ಕಲ್ಪಿಸಲಾಗಿದೆ.

ಈ ಅವಕಾಶದನ್ವಯ ಅನುದಾನ ಕೋರಿರುವ ಆಡಳಿತ ಮಂಡಳಿಗಳಲ್ಲಿನ ಶಾಲಾ/ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ. ಈ ಆಸ್ಪದವನ್ನು ಕಲ್ಪಿಸಿ ಈಗಾಗಲೇ 11 ವರ್ಷಗಳು ಗತಿಸಿದ್ದರೂ ಸಹ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಸ್ವೀಕೃತವಾಗಿದ್ದ 116 ಪ್ರಾಥಮಿಕ ಶಾಲೆಗಳು, 32 ಪ್ರೌಢಶಾಲೆಗಳು ಮತ್ತು 29 ಪದವಿಪೂರ್ವ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಗಳ ಕುರಿತು, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ : 28.09.2018 ರಂದು ನಡೆದ ಸಭೆಯ ನಿರ್ಣಯ ಈ ಕೆಳಕಂಡಂತಿದೆ:-

1. "1987 ರಿಂದ 1994-95ನೇ ಸಾಲಿನ ಅವಧಿಯಲ್ಲಿ ಪ್ರಾರಂಭಗೊಂಡು ಅವಿಚ್ಛಿನ್ನವಾಗಿ ನಡೆಯುತ್ತಿದ್ದು, ವೇತನಾನುದಾನವನ್ನು ಕೋರಿ, ಪ್ರಸ್ತುತ ಸರ್ಕಾರದ ಹಂತದಲ್ಲಿ ಬಾಕಿ ಇರುವ 116-ಪ್ರಾಥಮಿಕ ಶಾಲೆಗಳು, 32-ಪ್ರೌಢಶಾಲೆಗಳು ಮತ್ತು 29-ಪದವಿಪೂರ್ವ ಕಾಲೇಜುಗಳು ಸೇರಿದಂತೆ ಒಟ್ಟು 177 ಶಾಲಾ/ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಹಾಗೂ ಈಗಾಗಲೇ ಅನುದಾನಕ್ಕೆ ಒಳಪಡಿಸಿರುವ ಪದವಿಪೂರ್ವ ಶಿಕ್ಷಣ ಕಾಲೇಜುಗಳಲ್ಲಿ 120 ವಿದ್ಯಾರ್ಥಿಗಳ ಸಂಖ್ಯಾಬಲ ಇರುವ 178 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಶಿಕ್ಷಣ ಇಲಾಖೆಯು ಆರ್ಥಿಕ ಇಲಾಖೆಗೆ ಸಲ್ಲಿಸಿರುವ ಪ್ರಸ್ತಾವನೆಗಳನ್ನು ಅನುಮೋದಿಸಿ ವೇತನಾನುದಾನಕ್ಕೆ ಒಳಪಡಿಸಲು ಮತ್ತು ಮೇಲ್ಕಂಡ ಸಾಲಿನ ಅವಧಿಯಲ್ಲಿ ಪ್ರಾರಂಭಗೊಂಡಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು 2007ರಲ್ಲಿ ಅವಕಾಶ ಕಲ್ಪಿಸಿ ಈಗಾಗಲೇ 11 ವರ್ಷಗಳು ಗತಿಸಿದ್ದರೂ ಸಹ ಈವರೆವಿಗೂ ಉಳಿದ ಶಾಲೆಗಳ ಪ್ರಸ್ತಾವನೆಗಳು ಬಾರದೇ ಇದ್ದು ಅವುಗಳನ್ನು ಇನ್ನು ಮುಂದೆ ಪರಿಗಣಿಸಲಾಗುವುದಿಲ್ಲವೆಂದು ಸಭೆಯು ತೀರ್ಮಾನಿಸಿತು.
2. ಶಿಕ್ಷಣ ಇಲಾಖೆಯ ಅನುದಾನ ನೀತಿ ಸಂಹಿತ ಪ್ರಕಾರ "ಪ್ರಾಥಮಿಕ" ಶಾಲೆಗಳಿಗೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ 6 ಶಿಕ್ಷಕರು, 01 ದೈಹಿಕ ಶಿಕ್ಷಣ ಶಿಕ್ಷಕರು, "ಪ್ರೌಢಶಾಲೆಗಳಿಗೆ" 08 ಬೋಧಕ, 01 ಬೋಧಕೇತರ (ದ್ವಿದಸ) ಹುದ್ದೆಗಳನ್ನು ಹಾಗೆಯೇ "ಪದವಿ ಪೂರ್ವ" ಕಾಲೇಜುಗಳ 6 ಉಪನ್ಯಾಸಕ, 01 ದೈಹಿಕ ಶಿಕ್ಷಣ ಉಪನ್ಯಾಸಕ ಹಾಗೂ 01 ಬೋಧಕೇತರ (ದ್ವಿದಸ) ಹುದ್ದೆಗಳಿಗೆ ಆರ್ಥಿಕ ಇಲಾಖೆಯು ತಾತ್ವಿಕ ಅನುಮೋದನೆ ನೀಡಿದ ನಂತರ ಪ್ರತಿಯೊಂದು ಹುದ್ದೆಗಳನ್ನು ತುಂಬಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಕಳುಹಿಸುವ ಅವಶ್ಯವಿಲ್ಲ ಎಂದು ನಿರ್ಧರಿಸಲಾಯಿತು.

ಮೇಲಿನ ನಿರ್ಣಯದಂತೆ ಈಗಾಗಲೇ ವೇತನಾನುದಾನಕ್ಕೆ ಒಳಪಡಿಸಲು ಅವಕಾಶ ಕಲ್ಪಿಸಿ ಸುಮಾರು ಹನ್ನೊಂದು ವರ್ಷಗಳು ಗತಿಸಿದ್ದರೂ ಸಹ ಇಂತಹ ಅವಕಾಶವನ್ನು ಬಳಸಿಕೊಳ್ಳುವಲ್ಲಿ ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿಗಳು ಆಸಕ್ತಿ ವಹಿಸದೇ ಇರುವುದನ್ನು ಗಮನಿಸಿ ಈ ಅವಕಾಶವನ್ನು ಮುಂದುವರೆಸುವುದು ಅವಶ್ಯಕವಿಲ್ಲವೆಂದು ಸರ್ಕಾರವು ಮನಗಂಡಿರುವುದರಿಂದ ದಿನಾಂಕ 28.09.2018ರ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ

ಸಭೆಯಲ್ಲಿ ಮಂಡಿಸಿದ ದಿನಾಂಕ : 01.06.1987 ರಿಂದ 1994-95ನೇ ಅವಧಿಯಲ್ಲಿ ಪ್ರಾರಂಭಗೊಂಡಿರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಆಡಳಿತ ಮಂಡಳಿಗಳು ಸಲ್ಲಿಸಿರುವ ಕೋರಿಕೆಗಳನ್ನು ಹೊರತುಪಡಿಸಿ ಇನ್ನು ಮುಂದೆ ಯಾವ ಕೋರಿಕೆ/ಪ್ರಸ್ತಾವನೆಗಳನ್ನು ಪರಿಗಣಿಸದಿರಲು ನಿರ್ಣಯಿಸಿ ಈ ಕೆಳಕಂಡ ಆದೇಶ.

---

ಸರ್ಕಾರದ ಆದೇಶ ಸಂಖ್ಯೆ : ಇಡಿ 18 ಎಸ್‌ಇಪಿ 2018 (ಭಾಗ),
ಬೆಂಗಳೂರು, ದಿನಾಂಕ : 02ನೇ ಜನವರಿ, 2019.

ರವಾನಿಸಿದೆ 30/1/19

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ : 01.06.1987 ರಿಂದ 1994-95ನೇ ಅವಧಿಯಲ್ಲಿ ಪ್ರಾರಂಭವಾದ ಅನುದಾನರಹಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸಲ್ಲಿಕೆಯಾಗುವ ಕೋರಿಕೆ/ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದಲ್ಲ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ/ಪದವಿಪೂರ್ವ ಶಿಕ್ಷಣ ಇಲಾಖೆಯ ಅಧೀನ ಕಛೇರಿಗಳಲ್ಲಿಯೂ ಸಹ ಅಂತಹ ಪ್ರಸ್ತಾವನೆ/ಕೋರಿಕೆಗಳನ್ನು ಪರಿಗಣಿಸಬಾರದೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Rajyashree V.T

(ವಿ. ಟಿ. ರಾಜ್ಯಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ).

ಇವರಿಗೆ :-

**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ. ಸಿ8[3] ಶಾ:ಶಿ:ಅ.ಶಾ. ಅನು/1/2018-19. ದಿನಾಂಕ: 28-01-2019

**ಯಥಾಪ್ರತಿ**

ಸರ್ಕಾರದ ಪತ್ರ ಸಂಖ್ಯೆ: ಇಡಿ 18 ಎಸ್‌ಇಪಿ 2018 [ಭಾಗ] ಬೆಂಗಳೂರು ದಿನಾಂಕ:02.ಜನವರಿ,2019ರ ಯಥಾಪ್ರತಿಯನ್ನು ಸದರಿ ಪತ್ರದೊಂದಿಗೆ ಅನುಬಂಧಿಸಿ, ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳ ಅಗತ್ಯಕ್ರಮಕ್ಕಾಗಿ ಕಳುಹಿಸುತ್ತಾ, ಸರ್ಕಾರದ ಆದೇಶದಂತೆ ನಿಯಮಾನುಸಾರ ಕ್ರಮ ಜರುಗಿಸಲು ತಿಳಿಸಿದೆ.

ನಿರ್ದೇಶಕರು [ಪ್ರೌಢ ಶಿಕ್ಷಣ]

ಇವರಿಗೆ:-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಕಛೇರಿ ಪ್ರತಿ.